ಕರ್ನಾಟಕ ಸರ್ಕಾರ
ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ
(ಕರ್ನಾಟಕ ಸರ್ಕಾರದ ಅಂಗ ಸಂಸ್ಥೆ)
Government of Karnataka
Karnataka Residential Educational Institutions Society
(An Organisation of Govt. of Karnataka)

ಕವಶಿಸಸ/ಮೂಭೂ/ಸಿಆರ್- 09/2021-22 ದಿನಾಂಕ:22.12.2021

ಗೆ,

ಮಾನ್ಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು,
ಸಮಾಜ ಕಲ್ಯಾಣ ಇಲಾಖೆ,
ಬೆಂಗಳೂರು.

ಮಾನ್ಯರೇ,

**ವಿಷಯ:** ಕರ್ನಾಟಕ ಮೌಲ್ಯಮಾಪನ ಪ್ರಾಧಿಕಾರದ ವತಿಯಿಂದ ಕೈಗೊಂಡ ಮೌಲ್ಯಮಾಪನ ವರದಿಯ ಶಿಫಾರಸ್ಸುಗಳ ಮೇಲಿನ ಕ್ರಮಗಳ ಬಗ್ಗೆ.

**ಉಲ್ಲೇಖ:** 1) ಮಾನ್ಯ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ ರವರ ಅರೆ ಸರ್ಕಾರಿ ಪತ್ರ ಸಂಖ್ಯೆ: ಅ.ಸ.ಪ.ಸಂ. ಕೆಇಎ 51 ಎಟಿಆರ್ 2019 ದ ದಿನಾಂಕ: 30.09.2021.
2) ಈ ಕಛೇರಿಯ ಪತ್ರ ಸಂಖ್ಯೆ: ಕವಶಿಸಸ/ಮೂಭೂ/ಸಿಆರ್-09/2021-21 ದಿನಾಂಕ: 03.12.2021

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ(1)ರ ಅರೆ ಸರ್ಕಾರಿ ಪತ್ರದಲ್ಲಿ ಕರ್ನಾಟಕ ಮೌಲ್ಯಮಾಪನ ಪ್ರಾಧಿಕಾರದಿಂದ ಕರ್ನಾಟಕದ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗಗಳ ಬಾಲಕ ಬಾಲಕಿಯರಿಗಾಗಿ ಶುಚಿ ಸಂಭ್ರಮ ಕಿಟ್ ವಿತರಣೆಯ ಮೌಲ್ಯಮಾಪನ ಮಾಡಿದ್ದು, (2019-20) ವರದಿಯಲ್ಲಿ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘಕ್ಕೆ ಸಂಬಂಧಿಸಿದ ಅಂಶಗಳಿಗೆ ಈ ಕೆಳಕಂಡಂತೆ ಕ್ರಮ ಕೈಗೊಳ್ಳಲಾಗಿದೆ.

| ಕ್ರ ಸಂ. | ಮೌಲ್ಯಮಾಪನ ಪ್ರಾಧಿಕಾರದ ವರದಿಯ ಶಿಫಾರಸ್ಸು | ಸಂಘದಿಂದ ಕೈಗೊಂಡ ಕ್ರಮ |
|---|---|---|
| 1 | ಶುಚಿ ಸಂಭ್ರಮ ಕಿಟ್‌ನಲ್ಲಿರುವ ಸಾಬೂನು ಮತ್ತು ಎಣ್ಣೆಯ ಪ್ರಮಾಣವನ್ನು ಹೆಚ್ಚಿಸುವುದು. | ಕರ್ನಾಟಕ ಮೌಲ್ಯಮಾಪನ ಪ್ರಾಧಿಕಾರವು ಶಿಫಾರಸ್ಸು ಮಾಡಿರುವ ಶುಚಿ ಸಂಭ್ರಮ ಕಿಟ್‌ನಲ್ಲಿರುವ ಸಾಬೂನು ಮತ್ತು ಎಣ್ಣೆಯ ಪ್ರಮಾಣವನ್ನು ಹೆಚ್ಚಿಸುವ ಸಂಬಂಧ 2022-23ನೇ ಸಾಲಿನ ಸಂಘದ ಆಯವ್ಯಯದಲ್ಲಿ ಅಳವಡಿಸಿಕೊಂಡು, ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿ, ಸರ್ಕಾರದಿಂದ ಅನುಮೋದನೆ ದೊರೆತ ನಂತರ ವಸತಿ ಶಾಲೆ/ಕಾಲೇಜುಗಳಿಗೆ ಸರಬರಾಜು ಮಾಡಲು ಕ್ರಮ ಕೈಗೊಳ್ಳಲಾಗುವುದು. |
| 2 | ಟಾಲ್ಕಂ ಪೌಡರ್, ಶಾಂಪೂ, ಮೆಡಿಕೇರ್ ಮುಂತಾದ ಕೆಲವು ಹೆಚ್ಚುವರಿ ವಸ್ತುಗಳನ್ನು ಕಿಟ್‌ನಲ್ಲಿ ಸೇರಿಸುವುದು. | ಕರ್ನಾಟಕ ಮೌಲ್ಯಮಾಪನ ಪ್ರಾಧಿಕಾರವು ಶಿಫಾರಸ್ಸು ಮಾಡಿರುವ ಟಾಲ್ಕಂ ಪೌಡರ್, ಶಾಂಪೂ, ಮೆಡಿಕೇರ್ ಮುಂತಾದ ಕೆಲವು ಹೆಚ್ಚುವರಿ ವಸ್ತುಗಳನ್ನು ಕಿಟ್‌ನಲ್ಲಿ ಸೇರಿಸಿಕೊಳ್ಳಲು 2022-23ನೇ ಸಾಲಿನ ಸಂಘದ ಆಯವ್ಯಯದಲ್ಲಿ ಅಳವಡಿಸಿಕೊಂಡು, ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿ, ಸರ್ಕಾರದಿಂದ ಅನುಮೋದನೆ ದೊರೆತ ನಂತರ, ವಸತಿ ಶಾಲೆ/ಕಾಲೇಜುಗಳಿಗೆ ಸರಬರಾಜು ಮಾಡಲು ಕ್ರಮ ಕೈಗೊಳ್ಳಲಾಗುವುದು. |

30/12

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ
Karnataka Residential Educational Institutions Society

ಮುಂದುವರೆದ ಹಾಳೆ
Continuation Sheet 2

| | | |
|---|---|---|
| 3 | ಎಲ್ಲಾ ಸಾರ್ವಜನಿಕ ಆರೋಗ್ಯ ಕೇಂದ್ರಗಳಲ್ಲಿರುವ ಆಪ್ತ ಸಮಾಲೋಚನಾ ಕೇಂದ್ರಗಳ ಮೇಲುಸ್ತುವಾರಿಯನ್ನು ನೋಡಿಕೊಳ್ಳುತ್ತಿರುವ ವೈದ್ಯರು ಮತ್ತು ತಮ್ಮ ವ್ಯಾಪ್ತಿಯಲ್ಲಿ ಬರುವ ವಸತಿ ನಿಲಯಗಳಿಗೆ ತಿಂಗಳಿಗೆ ಒಮ್ಮೆಯಾದರು ಭೇಟಿ ಕೊಟ್ಟು, ವಸತಿ ನಿಲಯಗಳಲ್ಲಿ ವಾಸಿಸುವ ವಿದ್ಯಾರ್ಥಿಗಳಿಗೆ ಆಪ್ತ ಸಮಾಲೋಚನೆ ನಡೆಸಬೇಕು. | ಸದರಿ ಕಾರ್ಯವನ್ನು ಅನುಷ್ಠಾನಗೊಳಿಸಿ, ವರದಿ ಸಲ್ಲಿಸಲು ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಸೂಚಿಸಲಾಗಿದೆ. |
| 4 | ಆರೋಗ್ಯ ಸಹಾಯವಾಣಿ 104ನ್ನು ವಿದ್ಯಾರ್ಥಿಗಳು ಬಳಸಲು ಅದರ ಮಾಹಿತಿ ಎಲ್ಲಾ ವಸತಿ ನಿಲಯಗಳಲ್ಲಿ ಲಭ್ಯವಿರಬೇಕು. | ಆರೋಗ್ಯ ಸಹಾಯವಾಣಿ 104ನ್ನು ವಿದ್ಯಾರ್ಥಿಗಳು ಬಳಸಲು ಅದರ ಮಾಹಿತಿ ಎಲ್ಲಾ ವಸತಿ ನಿಲಯಗಳಲ್ಲಿ ಲಭ್ಯವಿರುವ ಬಗ್ಗೆ ವರದಿ ನೀಡಲು ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಸೂಚಿಸಲಾಗಿದೆ. |
| 5 | ಅದಕ್ಕಾಗಿ ಒಂದು ಕಾರ್ಯನಿರತ ದೂರವಾಣಿ ಸೌಲಭ್ಯವನ್ನು ವಸತಿ ನಿಲಯಗಳಲ್ಲಿ ಒದಗಿಸಬೇಕು. | ವಸತಿ ಶಾಲೆ/ಕಾಲೇಜುಗಳಲ್ಲಿ ಒಂದು ಕಾರ್ಯನಿರತ ದೂರವಾಣಿ ಸೌಲಭ್ಯವನ್ನು ಒದಗಿಸಲು ಜಿಲ್ಲಾ ಮಟ್ಟದ ಅಧಿಕಾರಿಗಳು ಕ್ರಮವಹಿಸಿ, ವರದಿ ನೀಡಲು ಸೂಚಿಸಲಾಗಿದೆ. |

ಮೇಲ್ಕಂಡ ಅಂಶಗಳನ್ನು ತಮ್ಮ ಅವಗಾಹನೆಗೆ ತರುತ್ತಾ, ಸದರಿ ಮಾಹಿತಿಯನ್ನು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ರವರಿಗೆ ಸಲ್ಲಿಸಬಹುದಾಗಿದೆಯೆಂದು ಕೋರಿದೆ.

*ವಂದನೆಗಳೊಂದಿಗೆ,*

ತಮ್ಮ ವಿಶ್ವಾಸಿ,

ಕಾರ್ಯನಿರ್ವಾಹಕ ನಿರ್ದೇಶಕರು,